ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 05 ನೇ ಫೆಬ್ರುವರಿ, 2021

"ಆತ್ಮ ನಿರ್ಭರ ಭಾರತ ಅಭಿಯಾನ" ಅಡಿಯಲ್ಲಿ ಅತಿ ಸಣ್ಣ ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಪುನಶ್ಚೇತನ

ಶ್ರೀ ಕೆ .ಎ. ತಿಪ್ಪೇಸ್ವಾಮಿ(ನಾಮನಿರ್ದೇಶನ ಹೊಂದಿದವರು) -

482 (505) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿರುವ ಒಟ್ಟು ಅತಿ ಸಣ್ಣ ಸಣ್ಣ ಮತ್ತು ಮಧ್ಯಮ ಕೈಗಾರಿಕಾ ಘಟಕಗಳೆಷ್ಟು; ಈ ವಲಯದಲ್ಲಿ ಸೃಜನೆಯಾಗಿರುವ ಹುದ್ದೆಗಳೆಷ್ಟು; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ವಿವರ ನೀಡುವುದು)

(ಆ) ಕೋವಿಡ್ ಸೋಂಕು-19 ಹರಡುವಿಕೆ ಹಿನ್ನೆಲೆಯಲ್ಲಿ ಲಾಕ್‌ಡೌನ್ ವಿಧಿಸಿದ್ದರ ಪ್ರಯುಕ್ತ ರಾಜ್ಯದಲ್ಲಿ ಬಾಧಿತವಾದ ಒಟ್ಟು ಅತಿ ಸಣ್ಣ ಸಣ್ಣ ಮತ್ತು ಮಧ್ಯಮ ಕೈಗಾರಿಕಾ ಘಟಕಗಳ ಸಂಖ್ಯೆ ಎಷ್ಟು; ಈ ಬಗ್ಗೆ ರಾಜ್ಯ ಸರ್ಕಾರ ಅಧಿಕೃತವಾಗಿ ಸಮೀಕ್ಷೆ ನಡೆಸಿದೆಯೇ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಇ) ಸದರಿ ಕೇಂದ್ರ ಸರ್ಕಾರ ಘೋಷಿಸಿರುವ "ಆತ್ಮ ನಿರ್ಭರ ಭಾರತ ಅಭಿಯಾನ"ದ ಅಡಿಯಲ್ಲಿ ಕೈಗಾರಿಕೆಗಳನ್ನು ಪುನಶ್ಚೇತನಗೊಳಿಸಲು ಮತ್ತು ಉದ್ಯಮಗಳಿಗೆ ಆರ್ಥಿಕ ನೆರವು ನೀಡುವ ಯೋಜನೆಯಲ್ಲಿ ವ್ಯಾಪಾರ ವಹಿವಾಟು ಸಾಲ, ಸರ್ಕಾರದಿಂದ ಷೇರು ತುಂಬುವುದು ಮತ್ತು ಸಾಲ ಖಾತ್ರಿ ಆರ್ಥಿಕ ನೆರವು ಅಡಿಯಲ್ಲಿ ರಾಜ್ಯಕ್ಕೆ ದೊರೆತಿರುವ ಆರ್ಥಿಕ ನೆರವು ಎಷ್ಟು; ಆರ್ಥಿಕ ನೆರವನ್ನು ಯಾವ ಯಾವ ಇಲಾಖೆಯ ಮುಖೇನ ಒದಗಿಸಲಾಗಿದೆ? (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)